**ದಿನಾಂಕ 11.01.2017ರಂದು ಸಂಜೆ 4:00 ಗಂಟೆಗೆ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಮಾನ್ಯ ಅಧ್ಯಕ್ಷರಾದ ಶ್ರೀಮತಿ ನಹೀಮಾ ಸುಲ್ತಾನಾ ನಜೀರ್ ಅಹಮದ್ ರವರ ಅಧ್ಯಕ್ಷತೆಯಲ್ಲಿ ನಡೆದ, ಗ್ರಾಮ ಪಂಚಾಯತ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಸಮಸ್ಯೆಗಳ ಬಗೆಗಿನ ಸಭೆಯ ನಡವಳಿಗಳು.**

<u>ಹಾಜರಿದ್ದವರು</u>

ಜಿಲ್ಲಾ ಪಂಚಾಯತ್ ಕಛೇರಿಯ, ಉಪಕಾರ್ಯದರ್ಶಿ(ಆಡಳಿತ), ಉಪಕಾರ್ಯದರ್ಶಿ (ಅಭಿವೃದ್ದಿ), ಮುಖ್ಯ ಯೋಜನಾಧಿಕಾರಿ, ಮುಖ್ಯ ಲೆಕ್ಕಾಧಿಕಾರಿ, ಯೋಜನಾ ನಿರ್ದೇಶಕರು(ಡಿಆರ್‌ಡಿಎ), ಸಹಾಯಕ ಕಾರ್ಯದರ್ಶಿ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
ಹಾಗೂ ಶ್ರೀ ರಾಜು, ಪೌರಕಾರ್ಮಿಕರ ಸಂಘದ ಅಧ್ಯಕ್ಷರು ಮತ್ತು ಇತರೆ ಪದಾಧಿಕಾರಿಗಳು.

ಮಾನ್ಯ ಅಧ್ಯಕ್ಷರು ಹಾಗೂ ಇತರೆ ಅಧಿಕಾರಿಗಳು ಮತ್ತು ಪೌರಕಾರ್ಮಿಕ ಸಂಘದ ಎಲ್ಲಾ ಪದಾಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದ ಉಪಕಾರ್ಯದರ್ಶಿ(ಆಡಳಿತ)ಯವರು, ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಧ್ಯಕ್ಷರನ್ನು ಕೋರಿದರು.

ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಾತನಾಡಿ, ಗ್ರಾಮ ಪಂಚಾಯಿತಿ ಪೌರಕಾರ್ಮಿಕರುಗಳ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಂಘದ ಪದಾಧಿಕಾರಿಗಳು ತಮ್ಮ ಅಹವಾಲು ತಿಳಿಸುವಂತೆ ಸೂಚಿಸಿದರು.

ಪೌರಕಾರ್ಮಿಕರುಗಳ ಸಂಘದ ಅಧ್ಯಕ್ಷರಾದ ಶ್ರೀ ರಾಜುರವರು ಎಲ್ಲಾ ಪದಾಧಿಕಾರಿಗಳ ಪರವಾಗಿ ಮಾತನಾಡುತ್ತಾ, ಪ್ರಮುಖವಾಗಿ ತಮ್ಮ 8 ಬೇಡಿಕೆಗಳನ್ನು ಈಡೇರಿಸುವಂತೆ, ಇವುಗಳಲ್ಲಿ ಜಿಲ್ಲಾ ಪಂಚಾಯತ್ ಹಂತದಲ್ಲಿ ಕೈಗೊಳ್ಳಬಹುದಾದ ತೀರ್ಮಾನಗಳನ್ನು ಕೈಗೊಳ್ಳುವಂತೆಯೂ, ಸರ್ಕಾರದ ಹಂತದಲ್ಲಿ ಕೈಗೊಳ್ಳಬೇಕಾದ ವಿಷಯಗಳ ಬಗ್ಗೆ ಸರ್ಕಾರಕ್ಕೆ ಶಿಫಾರಸ್ಸು ಮಾಡುವಂತೆಯೂ ವಿನಂತಿಸಿಕೊಂಡರು.

**<u>ಸಂಘದ ಪದಾಧಿಕಾರಿಗಳ ಬೇಡಿಕೆಗಳು</u>**

1. ದಿನಾಂಕ 04.08.2016ರಲ್ಲಿ ಸರ್ಕಾರದಿಂದ ಹೊರಡಿಸಲಾದ ಆದೇಶದಂತೆ ಎಲ್ಲಾ ಪೌರಕಾರ್ಮಿಕರಿಗೂ ಕನಿಷ್ಠ ವೇತನ ರೂ.12870/-ನ್ನು ನಿಗಧಿಪಡಿಸಿ ಸದರಿ ವೇತನವನ್ನು ಎಲ್ಲಾ ಪೌರಕಾರ್ಮಿಕರಿಗೂ ನಿಗಧಿತ ಅವಧಿಯೊಳಗೆ ಯಾವುದೇ ಬಾಕಿ ಇಲ್ಲದಂತೆ ವಿತರಣೆ ಮಾಡುವುದು.
2. ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರುಗಳಿಗೆ ನೇಮಕಾತಿ ಅನುಮೋದನೆ ನೀಡುವುದು.
3. ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸಿ ಮರಣ ಹೊಂದಿದ, ನಿವೃತ್ತಿ ಹೊಂದಿದ ಪೌರಕಾರ್ಮಿಕರುಗಳಿಗೆ ನಿಯಮಾನುಸಾರ ನೀಡಬೇಕಾದ ಉಪದನ ಕೊಡಿಸಿಕೊಡುವುದು.
4. ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಆದ್ಯತೆ ಮೇಲೆ ಮನೆಗಳನ್ನು ಒದಗಿಸಿಕೊಡುವುದು.
5. ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು ಮತ್ತು ಕುಟುಂಬದವರಿಗೆ ಕನಿಷ್ಠ ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ ನಡೆಸಲು ಕ್ರಮ ವಹಿಸುವುದು.
6. ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರ ಕುಟುಂಬದವರಿಗೆ ಅಂತ್ಯೋದಯ ಯೋಜನೆಯಡಿ ಪಡಿತರ ಚೀಟಿಗಳನ್ನು ಒದಗಿಸುವುದು.
7. ಸರ್ಕಾರದ ಆದೇಶದಂತೆ ಗ್ರಾಮ ಪಂಚಾಯಿತಿಗಳಲ್ಲಿ 5000 ಜನಸಂಖ್ಯೆಗೆ ಒಬ್ಬರು, 9000 ಜನಸಂಖ್ಯೆಗೆ ಇಬ್ಬರು ಮತ್ತು 13000 ಮತ್ತು ಹೆಚ್ಚಿನ ಜನಸಂಖ್ಯೆ ಹೊಂದಿರುವ ಕಡೆಗಳಲ್ಲಿ ಅನುಕ್ರಮವಾಗಿ ಒಂದು,